ದೃಷ್ಟಿಯಿಂದ ನ್ಯಾಯಬಾಹಿರವಾದ ತೆರಿಗೆಯನ್ನು ವಸೂಲಿ ಮಾಡುತ್ತೇವೆಂದು ಹೇಳಲೇ ಇಲ್ಲ. ಮಾನ್ಯ ದೇಶಪಾಂಡೆಯವರು ಹೇಳಿದಪ್ರಕಾರ, ರೈತರ ಮೇಲೆ ಬೀಳಬಾರದು, ಕಾರ್ಖಾನೆಯವರೇ ಕೊಡಬೇಕೆಂದು ಹೇಳುತ್ತಿದ್ದಾರೆ, ಅದರ ಬಗ್ಗೆ ನಾವು ಸುತ್ತೋಲೆಯನ್ನು ಕೊಡುತ್ತೇವೆ.

SRI. K.C. MODGEKAR DESAI : I request the Governemnt not to impose this purchase Tax atleast on marginal farmers. Are you going to cancel this purchase Tax?

4. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) : ಸನ್ಮಾನ್ಯ ಉಪಾಧ್ಯಕ್ಷರೇ, ಭಾರತ ಸಂವಿಧಾನ 205(1)ನೇ ಅನುಚ್ಛೇದದ ಮೇರೆಗೆ, 1994-95ನೇ ಸಾಲಿಗೆ ಸಂಬಂಧಿಸಿದ ಅನುಪೂರಕ ಅಂದಾಜುಗಳ (ಮೊದಲನೇ ಕಂತು)ನ್ನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಉಪಾಧ್ಯಕ್ಷರು : ಒಪ್ಪಿಸಲಾಯಿತು.

1994-95ನೇ ಸಾಲಿನ ಅನುದಾನದ ಬೇಡಿಕೆಗಳ ಮಂಡನೆ

ಅಭಿಯಾಚನೆ ಕ್ರಮಾಂಕ : 42 ಜಿಲ್ಲಾಡಳಿತ

ಶ್ರೀ ಧರ್ಮಸಿಂಗ್ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷರೇ "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಿಲ್ಲಾಡಳಿತಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 60,46,24,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ"

ಅಭಿಯಾಚನೆ ಕ್ರಮಾಂಕ : 51 - ಭೂಕಂದಾಯ ಇತ್ಯಾದಿ

ಶ್ರೀ ಧರ್ಮಸಿಂಗ್ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3- 1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಭೂ ಕಂದಾಯ ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 69,92,83,000 ರೂಪಾಯಿಗಳಿಗಿಂತ ಮೀರದ ಹಣವನ್ನು ಮತ್ತು ಬಂಡವಾಳ ಖಾತೆಯಲ್ಲಿ 6,01,75,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ."

ಅಭಿಯಾಚನೆ ಕ್ರಮಾಂಕ : 52 - ಮುದ್ರಾಂಕಗಳು ಮತ್ತು ನೋಂದಣಿ:

ಶ್ರೀ ಧರ್ಮಸಿಂಗ್ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-95ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮುದ್ರಾಂಕಗಳು ಮತ್ತು ನೋಂದಣಿಗಳಿಗೆ ಸಂದಾಯ ಮಾಡುವಲ್ಲಿ, ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 11,13,60,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ."

ಅಭಯಾಚನೆ ಕ್ರಮಾಂಕ : 24 - ಅರಣ್ಯ

ಶ್ರೀ ಹೆಚ್. ವಿಶ್ವನಾಥ್ (ಅರಣ್ಯ ಸಚಿವರು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, ದಿನಾಂಕ : 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ, ಅರಣ್ಯಕ್ಕೆ ಸಂದಾಯಮಾಡುವಲ್ಲಿ, ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 151,16,16,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 4,25,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತೇನೆ."

ಅಭಯಾಚನೆ ಕ್ರಮಾಂಕ : 62 - ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ

ಶ್ರೀ ಹೆಚ್.ಆರ್. ರಾಜು (ವಿಜ್ಞಾನ ಮತ್ತು ಯಂತ್ರ, ಕಲೆ ಮತ್ತು ಪರಿಸರ ರಾಜ್ಯಸಚಿವರು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 42,14,50,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ."

ಅಭಯಾಚನೆ ಕ್ರಮಾಂಕ : 59 - ಕಾರ್ಮಿಕ ಮತ್ತು ಉದ್ಯೋಗ

ಶ್ರೀ ಬ್ಲೇಸಿಯಸ್ ಡಿಸೋಜ (ಕಾರ್ಮಿಕ ಸಚಿವರು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, ದಿನಾಂಕ : 31-3-95ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಾರ್ಮಿಕ ಮತ್ತು ಉದ್ಯೋಗಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 59,96,05,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತೇನೆ."

ಅಭಯಾಚನೆ ಕ್ರಮಾಂಕ : 60 - ಹರಿಜನ, ಗಿರಿಜನ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, ದಿನಾಂಕ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ, ಹರಿಜನ, ಗಿರಿಜನ ಮತ್ತು ಹಿಂದುಳಿದ ವರ್ಗದವರ ಕಲ್ಯಾಣಗಳಿಗೆ ಸಂದಾಯ ಮಾಡುವಲ್ಲಿ, ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 230,29,74,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 30,56,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ."

ಅಭಯಾಚನೆ ಕ್ರಮಾಂಕ : 31 - ವೈದ್ಯಕೀಯ ಶಿಕ್ಷಣ

ಶ್ರೀ ಎಂ. ವೀರಪ್ಪ ಮೊಯಿಲಿ (ಶ್ರೀ ಬಿ. ಶಿವಣ್ಣ, ವೈದ್ಯಕೀಯ ಶಿಕ್ಷಣ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವೈದ್ಯಕೀಯ ಶಿಕ್ಷಣಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 112,70,75,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರಾ ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತೇನೆ."

ಅಭಿಯಾಚನೆ ಕ್ರಮಾಂಕ : 32 - ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು :

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ, 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 374,21,06,000ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತೇನೆ"

ಅಭಿಯಾಚನೆ ಕ್ರಮಾಂಕ : 01 - ವ್ಯವಸಾಯ (ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ನಿಗಮ ಹೊರತುಪಡಿಸಿ)

ಶ್ರೀ ಎಂ. ವೀರಪ್ಪ ಮೊಯಿಲಿ (ಶ್ರೀ ಹೆಚ್.ಎಂ. ರೇವಣ್ಣ, ಕೃಷಿ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವ್ಯವಸಾಯ (ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ನಿಗಮ ಹೊರತು) ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 225,91,38,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 13,95,51,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವ ಅನುದಾನದ ಬೇಡಿಕೆಯನ್ನು ಮಂಡಿಸುತ್ತಿದ್ದೇನೆ."

ಶ್ರೀ ಎಂ. ವೀರಪ್ಪ ಮೊಯಿಲಿ (ಶ್ರೀ ಎ. ಕೃಷ್ಣಪ್ಪ, ತೋಟಗಾರಿಕೆ ಸಚಿವರ ಪರವಾಗಿ) :

ಮಾನ್ಯ ಅಧ್ಯಕ್ಷರೇ, "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-95ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ತೋಟಗಾರಿಕೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 55,07,33,000 ಕೋಟಿ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 75,00,000 ರೂಪಾಯಿಗಳಿಗೆ ಮೀರದ ಮೊತ್ತವನ್ನು ಮಂಜೂರು ಮಾಡುವ ಅನುದಾನ ಬೇಡಿಕೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ".

ಅಭಿಯಾಚನೆ ಕ್ರಮಾಂಕ 4 ಮೀನುಗಾರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಶ್ರೀ ವಸಂತ ವಿ. ಸಾಲಿಯಾನ್ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31-3-95ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮೀನುಗಾರಿಕೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 18,53,46,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 23,02,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರುಮಾಡುವ ಅನುದಾನ ಬೇಡಿಕೆಯನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಭಿಯಾಚನೆ ಕ್ರಮಾಂಕ 49 ರೇವು ಮತ್ತು ಜಲಸಾರಿಗೆ ಸೇವೆಗಳು

ಮಾನ್ಯ ಅಧ್ಯಕ್ಷರೇ "ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ದಿನಾಂಕ 31Ë3Ë1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರೇವು ಮತ್ತು ಜಲಸಾರಿಗೆ ಸೇವೆಗಳಿಗಾಗಿ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ

ಖಾತೆಯಲ್ಲಿ 3,03,61,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 11,57,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡಲು ಸಭೆಯ ಮುಂದೆ ಅನುದಾನ ಬೇಡಿಕೆಯನ್ನು ಮಂಡಿಸುತ್ತೇನೆ."

ಉಪಾಧ್ಯಕ್ಷರು : ಬೇಡಿಕೆಗಳನ್ನು ಮಂಡಿಸಲಾಗಿದೆ. ಈಗ ಸಭೆಯನ್ನು ಮುಂದೂಡಿ ಮತ್ತೆ ಸಭೆಯು 3-00 ಗಂಟೆ ಸಮಾವೇಶಗೊಳ್ಳುವುದು.

(ಸಭೆಯು 1-55 ನಿಮಿಷಕ್ಕೆ ಮುಂದೂಡಲಾಯಿತು)

ಸದನವು ಮತ್ತೆ ಮಧ್ಯಾಹ್ನ 3-25ಕ್ಕೆ ಸಮಾವೇಶಗೊಂಡಿತು.

(ವಿಧಾನ ಸಭಾಧ್ಯಕ್ಷರಾದ ಶ್ರೀ ವಿ.ಎಸ್. ಕೌಜಲಗಿಯವರು ಅಧ್ಯಕ್ಷಪೀಠದಲ್ಲಿ ಉಪಸ್ಥಿತರಿದ್ದರು)

6. ನೆರೆ ಹಾವಳಿ ಮತ್ತು ಅನಾವೃಷ್ಟಿಯಿಂದ ರಾಜ್ಯದ ಕೆಲವು ಭಾಗಗಳಲ್ಲಿ ಉಂಟಾಗಿರುವ ಹಾನಿಯ ಬಗ್ಗೆ ಮುಂದುವರೆದ ಚರ್ಚೆ

+ ಶ್ರೀ ಆರ್.ವಿ. ದೇಶಪಾಂಡೆ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೇ, ಮಾನ್ಯ ಕಂದಾಯ ಸಚಿವರು, ಈ ವರ್ಷ ಅತಿವೃಷ್ಟಿ ಮತ್ತು ಬರಗಾಲ, ಇದರ ಬಗ್ಗೆ ನಾವೇನು ನಿಲುವಳಿ ಸೂಚನೆ ಕೊಟ್ಟಿದ್ದೇವೆ, ಈ ವಿಷಯವಾಗಿ ಈಗಾಗಲೇ ಒಂದು ಹೇಳಿಕೆಯನ್ನು ಕೊಟ್ಟಿದ್ದಾರೆ. ಆ ಹೇಳಿಕೆಯಲ್ಲಿ ಎಲ್ಲಾ ಅಸತ್ಯವಿದೆಯೆಂದು ನಾನು ಹೇಳುವುದಿಲ್ಲ. ಕೆಲವು ವಿಚಾರಗಳನ್ನು ನಾನು ಒಪ್ಪಿಕೊಳ್ಳಬೇಕಾಗುತ್ತದೆ. ಆದರೆ, ಕೆಲವು ವಿಚಾರದಲ್ಲಿ, ಅವರೇನು ಮಾಹಿತಿ ಕೊಟ್ಟಿದ್ದಾರೆ. ಅದು ಸರಿಯಲ್ಲ. ಮತ್ತು ಇವತ್ತು ನಾಡಿನ ರೈತ, 1990-91ನೇ ಇಸವಿಯಿಂದ ಎಷ್ಟು ಕಷ್ಟದಲ್ಲಿದ್ದಾನೆ, ಎಷ್ಟು ತೊಂದರೆಯಲ್ಲಿದ್ದಾನೆ. ಮಾನ್ಯ ಧರ್ಮಸಿಂಗ್‌ರಂಥವರು, ಒಬ್ಬ ಅನುಭವೀ ಸಚಿವರು. ಆದ್ದರಿಂದ ಅವರಿಗೆ ನಾವು ಹೆಚ್ಚು ಹೇಳುವ ಅವಶ್ಯಕತೆ ಇಲ್ಲ. ಏಕೆಂದರೆ, ಅವರಿಗೆ ರೈತರ ಪರಿಸ್ಥಿತಿ, ರೈತರ ಕಷ್ಟ ಚೆನ್ನಾಗಿ ಗೊತ್ತು, ಎಂದು ನಾನು ಭಾವಿಸುತ್ತೇನೆ. ಮಾನ್ಯ ಅಧ್ಯಕ್ಷರೇ, ಕಳೆದ ನಾಲ್ಕು ವರ್ಷದಿಂದ ಅಂದರೆ, 1990-91 ರಿಂದ ರಾಜ್ಯದಲ್ಲಿ ಬರಗಾಲ ಅಥವಾ ಅತಿವೃಷ್ಟಿ ಸಮಸ್ಯೆ ಇವೆ. ಪ್ರತಿವರ್ಷ ನಾವು ಇಲ್ಲಿ, ನಿಲುವಳಿ ಸೂಚನೆ ಮುಖಾಂತರ ಅಥವಾ ರೂಲ್ 68ರ ಮುಖಾಂತರ ನೋಟೀಸ್ ಕೊಡುವುದು ಮತ್ತು ಅದಕ್ಕೆ ಸರ್ಕಾರದಿಂದ ಉತ್ತರ ಬರುತ್ತದೆ. ಆದರೆ, ನಿಜವಾಗಿಯೂ ರೈತರಿಗೆ ಏನು ಸಹಾಯವಾಗಬೇಕಾಗಿದೆ, ಏನು ಅನುವು ಆಗಬೇಕು, ಏನು ರಿಯಾಯಿತಿ ಆಗಬೇಕಾಗಿದೆ, ಅದು ಆಗುತ್ತಾ ಇಲ್ಲವೆಂದು ಇವತ್ತು ನಾವು ಪ್ರಾಮಾಣಿಕವಾಗಿ ಒಪ್ಪಿಕೊಳ್ಳಬೇಕಾಗಿದೆ. ಸರ್ಕಾರ ಪ್ರತಿಸಾರಿ ಬರಗಾಲ ಬಂದಾಗ, ಅಥವಾ ಅತಿವೃಷ್ಟಿ ಬಂದಾಗ ಕೇಂದ್ರಸರ್ಕಾರಕ್ಕೆ ಮನವಿ ಕೊಡುವ ಕೆಲಸವಷ್ಟೇ ನಡೆಯುತ್ತಿವೆ. ಒಂದು ಮೊಮೊರ್ಯಾಂಡಂ ತಯಾರು ಮಾಡುವುದು, ಕೇಂದ್ರ ಸರಕಾರಕ್ಕೆ ಕೊಡುವುದು. ಮತ್ತು ಮೆಮೊರ್ಯಾಂಡಂ ಕೊಡುವ ಅವಶ್ಯಕತೆ ಇದೆಯೇ? ಇದರ ಬಗ್ಗೆಯೂ ಸಹ ನಾವು ಚರ್ಚೆ ಮಾಡಬೇಕಾಗುತ್ತದೆ. ಏಕೆಂದರೆ, ಕೇಂದ್ರಸರ್ಕಾರಕ್ಕೆ ಮೊಮೊರ್ಯಾಂಡಂ ಕೊಡುವುದಕ್ಕೆ ಮಾನ್ಯ ಮುಖ್ಯಮಂತ್ರಿಯವರು ಹೋಗುತ್ತಾರೆ, ನಮ್ಮ ಕಂದಾಯ ಸಚಿವರು ಹೋಗುತ್ತಾರೆ ಮತ್ತು ರೆವಿನ್ಯೂ ಕಮೀಷನರ್ ಅವರು ಹೋಗುತ್ತಾರೆ. ನಮ್ಮ ಅಧಿಕಾರಿಗಳು ಕಷ್ಟಪಟ್ಟಿದ್ದಾರೆ, ಕಷ್ಟಪಟ್ಟು ಎಲ್ಲಾ ಅಂಕಿಅಂಶಗಳನ್ನು ಸಂಗ್ರಹಣೆ ಮಾಡಿ ಆ ಮೆಮೋರ್ಯಾಂಡಂ ಕೊಡುತ್ತಾರೆ.

ನಂತರ ನಮ್ಮ ಮಾನ್ಯ ಸಚಿವರು ಹೇಳಿದ ಹಾಗೆ ಪ್ರಧಾನ ಮಂತ್ರಿಗಳು ಅವರ ಸ್ಪೆಷಲ್ ಶಬ್ದದಲ್ಲಿ ಹೇಳುವುದಾದರೆ ಪರ್ಸನಲ್ ರೆಪ್ರಸೆಂಟೇವ್ ಎಂಬ್ಯಾಸಿಗಳು ಬರುತ್ತಾರೆ. ಅವರು ಬಂದು ಹೆಲಿಕ್ಯಾಪ್ಟರ್‌ನಲ್ಲಿ ತಿರುಗಾಡುತ್ತಾರೆ. ಇಷ್ಟು ಆದ ನಂತರ